ನವೆಂಬರ್
2023

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್ · ಜಲೋತ್ಸವ · ಸ್ವಚ್ಛಮೇವ ಜಯತೇ

# ಸ್ವಚ್ಛತಾವಾಣಿ
ವಾರ್ತಾಪತ್ರ

ಸ್ವಚ್ಛ ಸಂಕೀರ್ಣ · ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ



## 01 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿ/ಬಿಟಿ ಸಚಿವರಿಂದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ

ಮೈಸೂರು ಜಿಲ್ಲಾ ಪಂಚಾಯಿತಿ ಡಿ. ದೇವರಾಜ ಅರಸು ಸಭಾಂಗಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿ/ಬಿಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಈ ವೇಳೆ ಜಿಲ್ಲೆಯ ಶಾಸಕರುಗಳು, ವಿಧಾನ ಪರಿಷತ್ ಸದಸ್ಯರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಿರಿಯ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಲು ಹಾಗೂ ಇಲಾಖೆಯ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## 02 ಗ್ರಾ ಮತ್ತು ಪಂ. ರಾಜ್ ಹಾಗೂ ಐಟಿ/ಬಿಟಿ ಸಚಿವರಿಂದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ






ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐ.ಟಿ/ಬಿ.ಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ದಕ್ಷಿಣ ಕನ್ನಡ ಜಿಲ್ಲೆಗೆ ಭೇಟಿ ನೀಡಿ ನೇತ್ರಾವತಿ ಸಭಾಂಗಣದಲ್ಲಿ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಿರಿಯ ಅಧಿಕಾರಿಗಳು, ಜಿಲ್ಲಾ ಪಂಚಾಯತ್ CEO, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, EE, AEE ಹಾಗೂ ಇಲಾಖೆಯ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.





## 03 ಪ್ರಿಕಾಸ್ಟ್ ಸಮುದಾಯ ಶೌಚಾಲಯ ಅಳವಡಿಕೆ ಕುರಿತು ಅಧಿಕಾರಿಗಳೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಐ.ಟಿ/ಬಿ.ಟಿ ಸಚಿವರ ಚರ್ಚೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಐ.ಟಿ/ಬಿ.ಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ದೊಡ್ಡಬಳ್ಳಾಪುರದ ಬಾಶೆಟ್ಟಹಳ್ಳಿಯ ಕೈಗಾರಿಕಾ ಪ್ರದೇಶದ ಇನಾಬಾಕ್ಸ್ ಸ್ಪೇಸಸ್ ಪ್ರೈ.ಲಿ.ಗೆ ಭೇಟಿ ನೀಡಿ ಪ್ರಿಕಾಸ್ಟ್ ಸಮುದಾಯ ಶೌಚಾಲಯ ಅನುಷ್ಠಾನ ಕುರಿತು ಚರ್ಚಿಸಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಿರಿಯ ಅಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## 04 ಗ್ರಾ ಮತ್ತು ಪಂ. ರಾಜ್ ಹಾಗೂ ಐಟಿ/ಬಿಟಿ ಸಚಿವರಿಂದ ಪರಿಹಾರ ಸಹಾಯವಾಣಿ ಕೇಂದ್ರಕ್ಕೆ ಭೇಟಿ





ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಐ.ಟಿ/ಬಿ.ಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪರಿಹಾರ ಸಹಾಯವಾಣಿ ಕೇಂದ್ರಕ್ಕೆ ಭೇಟಿ ನೀಡಿ ಸಹಾಯವಾಣಿಯ ಕಾರ್ಯವಿಧಾನವನ್ನು ಪರಿಶೀಲಿಸಿದರು. ಹಾಗೆ ಬಾಕಿ ಉಳಿದ ದೂರುಗಳನ್ನು ಪರಿಹರಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು



## 05 ಗ್ರಾ ಮತ್ತು ಪಂ. ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ ಅವರಿಂದ ಪ್ರಗತಿ ಪರಿಶೀಲನಾ ಸಭೆ

ಬೆಳಗಾವಿ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯವರಾದ ಶ್ರೀ ಅಂಜುಮ್ ಪರ್ವೇಝ್ ಅವರ ಅಧ್ಯಕ್ಷತೆಯಲ್ಲಿ ಜೆಜೆಎಂ ಹಾಗೂ ಎಸ್.ಬಿ.ಎಂ(ಗ್ರಾ) ಹಾಗೂ ಇತರ ಇಲಾಖೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ಜಿ.ಪಂ ಸಿಇಓ, ಅಪರ ಜಿಲ್ಲಾಧಿಕಾರಿ, ಉಪಕಾರ್ಯದರ್ಶಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## 06 ಗ್ರಾ.ಕು.ನೀ ಮತ್ತು ನೈ ಇಲಾಖೆ ನಿರ್ದೇಶಕರಿಂದ ಡಿ.ಎಲ್.ಐ ಅನುಷ್ಠಾನ ಕುರಿತ ಕಾರ್ಯಾಗಾರ ಉದ್ಘಾಟನೆ





ವಿಶ್ವಬ್ಯಾಂಕ್ ಸಹಯೋಗದೊಂದಿಗೆ ಜಿಲ್ಲಾ ಸಮಾಲೋಚಕರಿಗೆ ಆಯೋಜಿಸಿದ್ದ ರಾಜ್ಯ ಮಟ್ಟದ ಎರಡು ದಿನದ IEC ಮತ್ತು CB ಯೋಜನಾ ತಯಾರಿಕೆ ಹಾಗೂ DLIs ಅನುಷ್ಠಾನದ ಕುರಿತ ಕಾರ್ಯಾಗಾರವನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನಿರ್ದೇಶಕರಾದ ಶ್ರೀ ನಾಗೇಂದ್ರ ಪ್ರಸಾದ್ ಕೆ ರವರು ಉದ್ಘಾಟಿಸಿದರು. ಕಾರ್ಯಾಗಾರದಲ್ಲಿ ಶ್ರೀ ಎಸ್. ಸಿ ಮಹೇಶ್ ಉಪಕಾರ್ಯದರ್ಶಿ, ಶ್ರೀ ಜಾಫರ್ ಶರೀಫ್ ಸುತಾರ, ಉಪಕಾರ್ಯದರ್ಶಿ, ಶ್ರೀಮತಿ ಶೀತಲ್ ಸಿಂಗ್ ನಿರ್ದೇಶಕರು ISA ಹಾಗೂ ರಾಜ್ಯ ಸಮಾಲೋಚಕರು ಉಪಸ್ಥಿತರಿದ್ದರು.